ಇ) ಇಲ್ಲ. ಪ್ರತಿ ಸಾಲಿನಲ್ಲಿಯೂ ತೆರವಾದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗುತ್ತಿದೆ. ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

ಸರ್ಕಾರಿ ಪ್ರೌಢಶಾಲೆಗಳನ್ನು ಗಡಿ ಭಾಗದಲ್ಲಿ ಮಂಜೂರು ಮಾಡುವ ಬಗ್ಗೆ

90(80): ಶ್ರೀ ಜಯಚಂದ್ರ ಟಿ.ಬಿ. (ಶಿರಾ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು ಆಂಧ್ರಪ್ರದೇಶ ರಾಜ್ಯದ ಗಡಿಗೆ ಹೊಂದಿಕೊಂಡಿದ್ದು ಗಡಿ ಭಾಗದ ಆಂಧ್ರಪ್ರದೇಶಕ್ಕೆ ಸೇರಿದ ಮಡಕಶಿರಾ ಮತ್ತು ಅಕ್ಕಪಕ್ಕದ ಪ್ರದೇಶಗಳಲ್ಲಿ ಕನ್ನಡವನ್ನು ಹೆಚ್ಚಾಗಿ ಮಾತನಾಡುತ್ತಿದ್ದು, ಅವರುಗಳು ನಮ್ಮ ರಾಜ್ಯದ ಗಡಿ ಭಾಗದ ಕನ್ನಡ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿದ್ದು, ಗಡಿ ಪ್ರದೇಶದಲ್ಲಿ ಕಡಿಮೆ ಪ್ರೌಢಶಾಲೆಗಳಿದ್ದು, ಅಧಿಕ ವಿದ್ಯಾರ್ಥಿಗಳ ಒತ್ತಡವಿರುವುದರಿಂದ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಆ) ಗಡಿ ಭಾಗದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವುದರಿಂದ ಗಡಿ ಭಾಗವು ಅಭಿವೃದ್ಧಿಯಾಗಿ ಕನ್ನಡ ಭಾಷೆಯು ಅಭಿವೃದ್ಧಿಯಾದಂತಾಗುವುದಿಲ್ಲವೇ; ಇಂತಹವುಗಳನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಗಡಿ ಭಾಗದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಸರ್ಕಾರದ ನಿಲುವೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ ಅನುದಾನದ ಲಭ್ಯತೆಯನ್ನು ಆಧರಿಸಿ ಗಡಿ ಪ್ರದೇಶದಲ್ಲಿ ಹೊಸ ಪ್ರೌಢಶಾಲೆಗಳನ್ನು ತೆರೆಯಲಾಗುವುದು.

ಆ) ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಸ್ಥಳೀಯ ಅಗತ್ಯತೆಗನುಗುಣವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು.

ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ

91(237): ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಡಾ॥ ಡಿ.ಎಂ.ನಂಜುಂಡಪ್ಪ ವರದಿ ಅನ್ವಯ ಕೊಪ್ಪಳ ಲ್ಲೂಕುಅತೀ ಹಿಂದುಳಿದ ಶೈಕ್ಷಣಿಕ ಪ್ರದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ತಾಲ್ಲೂಕನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸಲು ಹಾಕಿಕೊಂಡಿರುವ ರೂಪುರೇಶೆಗಳೇನು?

ಆ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗಣೆಗೇರಾ, ಬೆಟಗೇರಿ, ಹಾಗೂ ಕವಲೂರು ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮತ್ತು ಓಜನಹಳ್ಳಿ, ಹಾಲವಾಗಿಲು, ಅಳವಂಡಿ ಹಟ್ಟಿ, ಚಿಲವಾಡಗಿ ಹಾಗೂ ಕುಣಿಕೇರಿ ಗ್ರಾಮಗಳಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಈ) ಸದರಿ ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳನ್ನು ಮಂಜೂರು ಮಾಡಿದರೆ ಈ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸಹಕಾರಿಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಉ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?